# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 68 |
| ಸದಸ್ಯರ ಹೆಸರು | : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) |
| **ಉತ್ತರಿಸುವ ದಿನಾಂಕ** | : **12-09-2022** |
| **ಉತ್ತರಿಸುವವರು** | : **ಸನ್ಮಾನ್ಯ ಮುಖ್ಯಮಂತ್ರಿಗಳು** |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬಂಡೀಪುರ, ನಾಗರಹೊಳೆ ಅರಣ್ಯ ಪ್ರದೇಶದಲ್ಲಿ ಮಳೂರಿನಿಂದ ಸೀಗೆವಾಡಿಯವರೆಗೆ ಆನೆಗಳ ಹಾವಳಿ ತಡೆಗಟ್ಟಲು ಸುಮಾರು 4 ಕಿ.ಮೀ ವಿಸ್ತೀರ್ಣದ ರೈಲ್ವೆ ಬ್ಯಾರಿಕೇಡ್ ನಿರ್ಮಾಣ ಕಾರ್ಯ ಬಾಕಿ ಉಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ) | ಕರ್ನಾಟಕ ವಿಧಾನ ಪರಿಷತ್ತಿನ ಅರ್ಜಿಗಳ ಸಮಿತಿಯು ಈ ಸಂಬಂಧ ಸ್ಥಳ ತನಿಖೆ ನಡೆಸಿ, ಸದರಿ ಕಾಮಗಾರಿಯನ್ನು ಪ್ರಸಕ್ತ ಸಾಲಿನಲ್ಲಿ ಪೂರ್ಣಗೊಳಿಸುವಂತೆ ನಿರ್ದೇಶಿಸಿದ್ದರೂ, ಕಾಮಗಾರಿಯನ್ನು ಇದುವರೆವಿಗೂ ಪೂರ್ಣಗೊಳಿಸದಿರಲು ಕಾರಣಗಳೇನು; (ಪೂರ್ಣ ವಿವರ ನೀಡುವುದು) | 2022-23ನೇ ಸಾಲಿನ ಕ್ರಿಯಾ ಯೋಜನೆಯನ್ವಯ ಮೊಳೆಯೂರು ವಲಯದ ವ್ಯಾಪ್ತಿಯಲ್ಲಿ ಮೊಳೆಯೂರಿನಿಂದ ಶೀಗೇವಾಡಿವರೆಗೆ 4.0654 ಕಿ.ಮೀ. ರೈಲ್ವೇ ಬ್ಯಾರಿಕೇಡ್ ನಿರ್ಮಾಣ ಕಾಮಗಾರಿಯನ್ನು ಕೈಗೊಳ್ಳಲು ವಿಸ್ತೃತ ಯೋಜನಾ (DPR) ವರದಿಯನ್ನು ತಯಾರಿಸಲಾಗಿದೆ.<br><br>ಈ ವರದಿಯನ್ನು ತಾಂತ್ರಿಕ ಪರಿಶೀಲನೆಗಾಗಿ ಲೋಕೋಪಯೋಗಿ ಇಲಾಖೆಗೆ ಸಲ್ಲಿಸಲಾಗಿದ್ದು, ಲೋಕೋಪಯೋಗಿ ಇಲಾಖೆಯಿಂದ ತಾಂತ್ರಿಕ ಪರಿಶೀಲನೆಯಾದ ನಂತರ ಟೆಂಡರ್ ಪ್ರಕ್ರಿಯೆ ಮೂಲಕ ಕಾಮಗಾರಿಯನ್ನು ಕೈಗೊಳ್ಳಲು ಕ್ರಮವಹಿಸಲಾಗುವುದು. |
| ಇ) | ಯಾವ ಕಾಲಮಿತಿಯಲ್ಲಿ ಸದರಿ ಬಾಕಿ ಉಳಿದ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು? | ರೈಲ್ವೆಬ್ಯಾರಿಕೇಡ್ ಕಾಮಗಾರಿಯನ್ನು ಟೆಂಡರ್ ಮೂಲಕ ಕೈಗೊಂಡು ಪ್ರಸಕ್ತ ಆರ್ಥಿಕ ವರ್ಷದ ಅಂತ್ಯದೊಳಗೆ ಪೂರ್ಣಗೊಳಿಸಲು ಕ್ರಮವಹಿಸಲಾಗುವುದು. |

**ಸಂಖ್ಯೆ: ಅಪಜೀ 124 ಎಫ್‌ಡಬ್ಲ್ಯೂಎಲ್ 2022**

**(ಬಸವರಾಜ ಬೊಮ್ಮಾಯಿ)**
ಮುಖ್ಯಮಂತ್ರಿಗಳು